**ಕರ್ನಾಟಕ ಸರ್ಕಾರ**

**ಸಂಖ್ಯೆ:** ಡಿಟಿಇ 427 ಎಸಿಎಂ(2) 2016-17

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 02-08-2017.

**-:: ಸುತ್ತೋಲೆ ::-**

**ವಿಷಯ:** 2017-18ನೇ ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಅನುಗುಣವಾದ ಕೋರ್ಸ್‌ಗಳ ಪ್ರಥಮ **ಸಂಜೆ** ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಖಾಲಿ ಉಳಿದಿರುವ ಸೀಟುಗಳಿಗೆ ಅರ್ಜಿ ವಿತರಣೆ ಮತ್ತು ಸ್ವೀಕರಿಸುವ ಕುರಿತು ಪ್ರವೇಶಾವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಸಮ ಸಂಖ್ಯೆ ಅಧಿಸೂಚನೆ ದಿನಾಂಕ:16-05-2017 & 01-06-2017.
2. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ದಿ:20-06-2017 & 22-06-2017.
3. ಹಲವು ಸಂಜೆ ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿ.

-00000000-

2017-18ನೇ ಸಾಲಿನ ಪ್ರಥಮ **ಸಂಜೆ** ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಉಲ್ಲೇಖ(1) & (2)ರ ಈ ಕಛೇರಿ ಪ್ರವೇಶಾಧಿಸೂಚನೆಯಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಪ್ರವೇಶ ಅರ್ಜಿಗಳನ್ನು ನೀಡುವ ಹಾಗೂ ಸ್ವೀಕರಿಸುವ ಸಂಬಂಧ ಅಂತಿಮ ದಿನಾಂಕವನ್ನು 20-07-2017 ಎಂದು ನಿಗದಿಪಡಿಸಲಾಗಿತ್ತು.

ಉಲ್ಲೇಖ(3)ರ ಪ್ರಿನ್ಸಿಪಾಲರ ಪತ್ರದಲ್ಲಿ 2017-18ನೇ ಸಾಲಿನಲ್ಲಿ ಕರ್ನಾಟಕ ಸರ್ಕಾರಿ (ಸಂಜೆ) ಪಾಲಿಟೆಕ್ನಿಕ್, ಮಂಗಳೂರು, ಎಸ್.ಜೆ ಸರ್ಕಾರಿ ಸಂಜೆ ಪಾಲಿಟೆಕ್ನಿಕ್ ಹಾಗೂ ಎಂ.ಇ.ಐ (ಸಂಜೆ) ಪಾಲಿಟೆಕ್ನಿಕ್‌ಗಳಲ್ಲಿ ಬಾಕಿ ಉಳಿದಿರುವ ಸೀಟುಗಳನ್ನು ಭರ್ತಿ ಮಾಡಲು ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲು ಹಾಗೂ ಸ್ವೀಕರಿಸಲು ಅಂತಿಮ ದಿನಾಂಕವನ್ನು ವಿಸ್ತರಿಸಬೇಕೆಂದು ಕೋರಿರುತ್ತಾರೆ. ಈ ಸಂಬಂಧದಲ್ಲಿ ಪ್ರಿನ್ಸಿಪಾಲರ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ಈ ಕೆಳಕಂಡಂತೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.

**ಅರ್ಜಿ ಪಡೆಯಲು ಮತ್ತು ಸ್ವೀಕರಿಸಲು ವಿಸ್ತರಿಸಲಾದ ಅಂತಿಮ ದಿ:07-08-2017ರ ಸಂಜೆ 7:30 ಗಂಟೆಯವರೆಗೆ**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ಆಯಾ ದಿನದಂದು ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸ್ವೀಕೃತವಾದ ದಿನಾಂಕದಂದೇ ಪ್ರಿನ್ಸಿಪಾಲರು ತಮ್ಮ ಹಂತದಲ್ಲಿಯೇ ಪರಿಶೀಲಿಸಿ ನಿಯಮಗಳ ಪ್ರಕಾರ ಅರ್ಹ ಅಭ್ಯರ್ಥಿಗಳ ಸೀಟು ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಪ್ರವೇಶ ನೀಡತಕ್ಕದ್ದು. **ಪ್ರಥಮ ಡಿಪ್ಲೋಮಾ ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ. ಪ್ರಯುಕ್ತ, ಇದನ್ನು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.**

ನಿರ್ದೇಶಕರು

**ಇವರಿಗೆ,**

1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು. - ಸರ್ಕಾರಿ/ಅನುದಾನಿತ ಸಂಜೆ ಪಾಲಿಟೆಕ್ನಿಕ್‌ನ ಅನುದಾನಿತ ಕೋರ್ಸುಗಳಿಗೆ ಸೀಟು **ಆಯ್ಕೆ ಪ್ರಕ್ರಿಯೆಯನ್ನು ತಮ್ಮ ಸಂಸ್ಥೆಯಲ್ಲಿಯೇ ನಡೆಸುವ**

ಬಗ್ಗೆ ತಮ್ಮ ಹಂತದಲ್ಲಿಯೇ ಕ್ರಮ ತೆಗೆದುಕೊಂಡು ನಿಯಮಗಳ ಪ್ರಕಾರ ಪ್ರವೇಶ ನಡೆಸುವಲ್ಲಿ ಸೂಕ್ತ ವ್ಯವಸ್ಥೆ ಮಾಡಿ ನಿರ್ದೇಶನಾಲಯಕ್ಕೆ ಮಾಹಿತಿ ನೀಡುವುದು. ಹಾಗೂ ಈ ಬಗ್ಗೆ ಪ್ರತ್ಯೇಕ ಮಾರ್ಗಸೂಚಿಯನ್ನು ವಿದ್ಯಾರ್ಥಿಗಳಿಗೆ ತಮ್ಮ ಸಂಸ್ಥೆಯಲ್ಲಿಯೇ ನೀಡುವುದು. ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲೂ ಸಹ ಪ್ರಕಟಿಸುವುದು.

2. **ಪ್ರಾಂಶುಪಾಲರು, ಕರ್ನಾಟಕ ಸರ್ಕಾರಿ (ಸಂಜೆ) ಪಾಲಿಟೆಕ್ನಿಕ್, ಮಂಗಳೂರು.**

**ಪ್ರತಿ:-**

1. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂ.ಶಿ.ನಿ, ಬೆಂಗಳೂರು.
2. ನಿರ್ದೇಶಕರ ಆಪ್ತಶಾಖೆಗೆ.
3. ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ. ಬೆಂಗಳೂರು – ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
4. ಕಛೇರಿ ಪ್ರತಿ.